

ಸಹ್ಯಾದ್ರಿ ಕಾಲೇಜ್ ಆಫ್ ಎಂಜಿನಿಯರಿಂಗ್ ಮತ್ತು ಮ್ಯಾನೇಜ್‌ಮೆಂಟ್, ಸಿವಿಲ್ ಎಂಜಿನಿಯರಿಂಗ್ ವಿಭಾಗ ಮತ್ತು ಕರ್ನಾಟಕ ರಾಜ್ಯಮಾಲಿನ್ಯ ನಿಯಂತ್ರಣ ಮಂಡಳಿ ಸಹಯೋಗದಲ್ಲಿ ವಿಶ್ವಪರಿಸರ ದಿನಾಚರಣೆ 2019 ಅಂಗವಾಗಿ ವಾಯುಮಾಲಿನ್ಯ, ಹವಾಮಾನ ಬದಲಾವಣೆ ಮತ್ತು ಅದರ ಪರಿಣಾಮ ಕುರಿತು ಎರಡು ದಿನಗಳ ಕಾರ್ಯಾಗಾರ ಇತ್ತೀಚೆಗೆ ಮಂಗಳೂರಿನ ಸಹ್ಯಾದ್ರಿ ಕ್ಯಾಂಪಸ್‌ನಲ್ಲಿ ನಡೆಯಿತು. ಪ್ರಧಾನ ಜಿಲ್ಲಾನ್ಯಾಯಾಧೀಶ ಕಡ್ಲೂರ್ ಸತ್ಯನಾರಾಯಣ ಆಚಾರ್ಯ ಉದ್ಘಾಟಿಸಿದರು. ಪ್ರಿನ್ಸಿಪಾಲ್ ಡಾ.ಶ್ರೀನಿವಾಸ್ ರಾವ್ ಕುಂಟೆ ಅಧ್ಯಕ್ಷತೆ ವಹಿಸಿದ್ದರು. ಕರ್ನಾಟಕ ಸಾರ್ವಜನಿಕ ಸೇವಾ ಆಯೋಗದ ಡಾ.ಆರ್.ಲಕ್ಷ್ಮೀನಾರಾಯಣ, ಸಂಶೋಧನಾ ನಿರ್ದೇಶಕ ಡಾ.ಎಸ್. ಮಂಜಪ್ಪ, ಪರಿಸರ ಅಧಿಕಾರಿ ರಾಜಶೇಖರ್ ಪುರಾಣಿಕ್, ಉಡುಪಿ ಪರಿಸರ ಅಧಿಕಾರಿ ಡಾ.ಎಚ್.ಲಕ್ಷ್ಮೀಕಾಂತ್, ವಿಜ್ಞಾನಿ ಡಾ.ಮಾಣಿಪ್ಪಾಡಿ ಕೃಷ್ಣಕುಮಾರ್, ಪ್ರಾಧ್ಯಾಪಕ ಡಾ.ಶ್ರೀಹರಿ, ಪ್ರಾಧ್ಯಾಪಕ ಡಾ.ರಾಜಮೋಹನ್ ಬಿ. ಮತ್ತಿತರರು ಭಾಗವಹಿಸಿದ್ದರು.